ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

**ಓದಲಾಗಿದೆ:** ದಿನಾಂಕ :

1. ಎಮ್‌ಎಸ್‌ಇಬಿ/ಬಿ.ಪಿ.ಓ-25/72-73, ದಿನಾಂಕ: 02.05.1972.
2. ಕವಿಮಂ/ಸಿ.ಎಲ್.ಓ/ಬಿ14/5239/82-83, ದಿನಾಂಕ: 08.05.1984.
3. ಕವಿಮಂ/ಸಿ.ಎಲ್.ಓ/ಬಿ14/5239/82-83, ದಿನಾಂಕ: 02.11.1984.
4. ಕವಿಮಂ/ಸಿ.ಎಲ್.ಓ/ಬಿ14/5239/82-83, ದಿನಾಂಕ: 30.11.1984.
5. ಕವಿಮಂ/ಬಿ16/4739/80-81(ಎ), ದಿನಾಂಕ: 17.04.1997.
6. ನಿಗಮದ ದಿನಾಂಕ: 30.11.2020 ರಂದು ನಡೆದ 122ನೇ ಮಂಡಳ ನಿರ್ದೇಶಕರುಗಳ ಸಭೆಯ ನಿರ್ಣಯ.

**ಪ್ರಸ್ತಾವನೆ:**

ಕವಿಪ್ರನಿನಿ/ಎಸ್ಕಾಂಗಳಲ್ಲಿ ನಿಯೋಜನೆ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳಿಗೆ ಮಂಡಳಿ ಆದೇಶ ಸಂಖ್ಯೆ: ಕವಿಮಂ/ಸಿ.ಎಲ್.ಓ/ಬಿ14/5239/1982-83, ದಿನಾಂಕ: 02.11.1984 ಮತ್ತು 30.11.1984ರನ್ವಯ ಉಚಿತ/ರಿಯಾಯಿತಿ ವಿದ್ಯುತ್ ಸರಬರಾಜು ಸೌಲಭ್ಯವನ್ನು ವಿಸ್ತರಿಸಲಾಗಿರುತ್ತದೆ.

ನಿಗಮವು ದಿನಾಂಕ: 17.04.1997 ರ ಅಧಿಸೂಚನೆ ಸಂಖ್ಯೆ: ಕವಿಮಂ/ಬಿ16/4739/80-81(ಎ) ರಲ್ಲಿ ಕವಿಮಂ ನೌಕರಿ ಭರ್ತಿ ಮತ್ತು ಬಡತಿ ನಿಯಮಗಳಿಗೆ ತಿದ್ದುಪಡಿ ಮಾಡಿ, ದಿನಾಂಕ: 08.05.1997 ರಿಂದ ಜಾರಿಗೆ ಬರುವಂತೆ ಇನ್ನು ಮುಂದೆ ಯಾವುದೇ ಹುದ್ದೆಗೆ ನೇಮಕಗೊಳ್ಳುವ ಅಭ್ಯರ್ಥಿಗಳಿಗೆ ಉಚಿತ/ರಿಯಾಯಿತಿ ವಿದ್ಯುತ್ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲವೆಂದು ತಿಳಿಸಲಾಗಿರುತ್ತದೆ.

ಮುಂದುವರೆದು, ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ಹಾಗೂ ಪೊಲೀಸ್ ಇಲಾಖೆ ಸಿಬ್ಬಂದಿಗಳು ಕವಿಪ್ರನಿನಿ ಮತ್ತು ಎಸ್ಕಾಂಗಳಲ್ಲಿ ನಿಯೋಜನೆ ಮೇರೆಗೆ ಕಾರ್ಯನಿರ್ವಹಿಸುತ್ತಿದ್ದು, ಈ ಹಿಂದೆ ಸದರಿ ಸಂಖ್ಯೆ ಕಡಿಮೆ ಪ್ರಮಾಣದಲ್ಲಿದ್ದರಿಂದ ಹಾಗೂ ಸದರಿ ಸಿಬ್ಬಂದಿಯು ದಿನಾಂಕ: 08.05.1997 ಕ್ಕಿಂತ ಹಿಂದೆ ಕೆಲಸಕ್ಕೆ ಸೇರಿದ ಹಿನ್ನಲೆಯಲ್ಲಿ, ನಿಯೋಜನೆ ಮೇಲೆ ಕವಿಪ್ರನಿನಿ/ಎಸ್ಕಾಂಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ ಉಚಿತ ವಿದ್ಯುತ್ ಸೌಲಭ್ಯವನ್ನು ಮುಂದುವರೆಸಲಾಗಿರುತ್ತದೆ.

ಕವಿಪ್ರನಿನಿಯು ವಿದ್ಯುತ್ ಸರಬರಾಜು ಕಂಪನಿಗಳಾಗಿ ವಿಭಜನೆಗೊಂಡ ಹಿನ್ನಲೆಯಲ್ಲಿ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ಹಾಗೂ ಪೊಲೀಸ್ ಇಲಾಖೆ ಸಿಬ್ಬಂದಿಗಳು ಕವಿಪ್ರನಿನಿ ಮತ್ತು ಎಸ್ಕಾಂಗಳಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುವ ಸಂಖ್ಯೆಯು ಕೂಡ ಅಧಿಕವಾಗಿರುತ್ತದೆ.

ದಿನಾಂಕ: 08.05.1997 ರ ನಂತರ ಕವಿಪ್ರನಿನಿ ಹಾಗೂ ಎಸ್ಕಾಂಗಳಲ್ಲಿ ನೇಮಕಗೊಂಡು ಕಾರ್ಯನಿರ್ವಹಿಸುತ್ತಿರುವ ಸುಮಾರು 40000 ಕ್ಕಿಂತ ಹೆಚ್ಚು ಖಾಯಂ ಅಧಿಕಾರಿ/ನೌಕರರುಗಳಿಗೆ ಉಚಿತ ವಿದ್ಯುತ್ ಸೌಲಭ್ಯವನ್ನು ಒದಗಿಸದೇ ಇರುವುದರಿಂದ ಹಾಗೂ ಇತರ ಇಲಾಖೆಯಿಂದ ನಿಯೋಜನೆ ಮೇಲೆ ಕವಿಪ್ರನಿನಿ/ಎಸ್ಕಾಂಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ ಉಚಿತ ವಿದ್ಯುತ್ ಸೌಲಭ್ಯವನ್ನು ಒದಗಿಸುತ್ತಿರುವುದರಿಂದ ತಾರತಮ್ಯ ಉಂಟಾಗಿದ್ದು, ಇದನ್ನು ಸರಿಪಡಿಸಲು

ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸಿಬ್ಬಂದಿಗಳಿಗೆ (ಕವಿಪ್ರನಿನಿ/ಎಸ್ಕಾಂಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕ್ರಿಯಾನಾತ್ಮಕ ನಿರ್ದೇಶಕರುಗಳನ್ನು ಹೊರತುಪಡಿಸಿ) ಒದಗಿಸುತ್ತಿರುವ ಉಚಿತ ವಿದ್ಯುತ್ ಸೌಲಭ್ಯವನ್ನು ಸ್ಥಗಿತಗೊಳಿಸುವುದರ ಬಗ್ಗೆ ದಿನಾಂಕ: 30.11.2020 ರಂದು ನಡೆದ 122ನೇ ಮಂಡಳಿ ನಿರ್ದೇಶಕರುಗಳ ಸಭೆಯಲ್ಲಿ ಚರ್ಚಿಸಿ ನಿರ್ಣಯಿಸಲಾಗಿದ್ದು, ಮಂಡಳಿ ಸಭೆಯ ನಿರ್ಣಯದನ್ವಯ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಕವಿಪ್ರನಿನಿ/ಬಿ14/ಬಿ23/5239/1982-83**

**ಬೆಂಗಳೂರು, ದಿನಾಂಕ: 10 FEB 2021**

ಕವಿಪ್ರನಿನಿ/ಎಸ್ಕಾಂಗಳಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುವ/ ಕಾರ್ಯನಿರ್ವಹಿಸುತ್ತಿರುವ ಕೇಂದ್ರ/ರಾಜ್ಯ ಸರ್ಕಾರದ ಕ್ರಿಯಾನಾತ್ಮಕ ನಿರ್ದೇಶಕರುಗಳನ್ನು(Functional Board Directors) ಹೊರತುಪಡಿಸಿ ಬೇರೆ ಇಲಾಖೆಗಳಿಂದ ನಿಯೋಜನೆ ಮೇಲೆ ನಿಗಮ/ಎಸ್ಕಾಂಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಳಿದ ಎಲ್ಲಾ ಅಧಿಕಾರಿ/ನೌಕರರಿಗೆ ಒದಗಿಸಲಾಗುತ್ತಿರುವ ರಿಯಾಯಿತಿ/ಉಚಿತ ವಿದ್ಯುತ್ ಸೌಲಭ್ಯವನ್ನು ದಿನಾಂಕ: 30.11.2020 ರಿಂದ ಜಾರಿಗೆ ಬರುವಂತೆ ಸ್ಥಗಿತಗೊಳಿಸಲಾಗಿದೆ.

'ಆದೇಶದ ಮೇರೆಗೆ'

**ನಿರ್ದೇಶಕರು(ಆಡಳಿತ ಮತ್ತು ಮಾ.ಸಂ),**
**ಕವಿಪ್ರನಿನಿ**

**ಪ್ರತಿಯನ್ನು:**

1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ, ನಿಗಮ ಕಾರ್ಯಾಲಯ, ಬೆಂಗಳೂರು.
6. ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ, ನಿಗಮ ಕಾರ್ಯಾಲಯ, ಬೆಂಗಳೂರು.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ**

1. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
2. ಎಲ್ಲಾ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
3. ಎಲ್ಲಾ ಉಪಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು .

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು ಕವಿಪ್ರನಿನಿ ನೌಕರರ ಸಂಘ (ನೋಂದಣಿ ಸಂಖ್ಯೆ:659), ಬೆಂಗಳೂರು ಮತ್ತು ನಿರ್ದೇಶಕರು ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಪಿಂಚಣಿದಾರರ ಸಂಘ, ಕಾವೇರಿ ಭವನ, ಬೆಂಗಳೂರು.